**ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಜೇವರ್ಗಿ**

**OS No.68/2022**

**ಸಾಕ್ಷಿಗೆ ದಿನಾಂಕ 28-11-2024 ರಂದು ಪ್ರಮಾಣ ವಚನ ಬೋಧಿಸಲಾಯಿತು**

| | | | |
|---|---|---|---|
| ಸಾಕ್ಷಿಯ ಹೆಸರು | ಃ | ಸುಭಾಸ | PW-1 |
| ತಂದೆ ಹೆಸರು | ಃ | ಗೋಪಾಲ ಚವಾಣ | |
| ವಯಸ್ಸು | ಃ | 36 ವರ್ಷ | |
| ಉದ್ಯೋಗ | ಃ | ಒಕ್ಕಲುತನ | |
| ವಾಸಸ್ಥಳ | ಃ | ಕೋಡ್ಲಿ ತಾಃ ಕಾಳಗಿ | |

**ಸಾಕ್ಷಿ ತನಗೆ ಕನ್ನಡ ಭಾಷೆ ಗೊತ್ತಾಗಲ್ಲ ಅಂತಾ ಹೇಳಿದ್ದಕ್ಕೆ ವಾದಿ ಪರ ಶ್ರೀ ಎಸ್.ಪಿ.ಆರ್. ವಕೀಲರು ಸಾಕ್ಷಿಗೆ ಹಿಂದಿ ಭಾಷೆಯಲ್ಲಿ ಹೇಳಿ ನ್ಯಾಯಾಲಯಕ್ಕೆ ಕನ್ನಡ ಭಾಷೆಯಲ್ಲಿ ಭಾಷಾಂತರಿಸಿ ಹೇಳಿದಂತೆ ಸಾಕ್ಷಿಯ ಮುಖ್ಯ ವಿಚಾರಣೆ ಈ ಕೆಳಗಿನಂತೆ ತೆಗೆದುಕೊಳ್ಳಲಾಯಿತು.**

**ಮುಖ್ಯ ವಿಚಾರಣೆಃ ಶ್ರೀಎಸ್.ಪಿ.ಆರ್. ವಾದಿ ಪರ ವಕೀಲರಿಂದ**

ಮುಖ್ಯ ವಿಚಾರಣೆ ಬದಲಾಗಿ ನಾನು ಸಲ್ಲಿಸಿದ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಮುಖ್ಯ ವಿಚಾರಣೆ ಬದಲಾಗಿ ಸಲ್ಲಿಸಿರುವ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳನ್ನು ವಕೀಲರು ನನಗೆ ಗೊತ್ತಿರುವ ಭಾಷೆಯಲ್ಲಿ ಓದಿ ಹೇಳಿರುತ್ತಾರೆ.

ದಿನಾಂಕ 16-07-2019 ರಂದು ಪ್ರತಿವಾದಿ ನನಗೆ ಬರೆದುಕೊಟ್ಟ ನೊಂದಾಯಿತ ಕ್ರಯದ ಕರಾರಿನ ಮೂಲ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ನಿಪಿ-1 ರ ಮೇಲಿರುವ ಪ್ರತಿವಾದಿಯ ಹೆಬ್ಬೆಟ್ಟಿನ ಗುರುತನ್ನು ಸಾಕ್ಷಿ ನೋಡಿ ಗುರುತಿಸಿದ ಕಾರಣ ಅದನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ನಿಪಿ-1 ರ ದಾಖಲೆಗೆ ಸಾಕ್ಷಿದಾರರಾಗಿ ಸಹಿ ಮಾಡಿದ ವಿನೋದರವರ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ ಕಾರಣ ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ನಿಪಿ-1 ರ ದಾಖಲೆಗೆ ಸಾಕ್ಷಿದಾರರಾಗಿ ಸಹಿ ಮಾಡಿದ ಸಂಜೀವ ರಾಠೋಡರವರ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ ಕಾರಣ ಅದನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿ ನಿಪಿ-1 ರ ಮೇಲಿರುವ ದಸ್ತಾವೇಜು ಬರಹಗಾರರ ಸಹಿಯನ್ನುನೋಡಿ ಗುರುತಿಸಿದ್ದು ಆದರೆ ಅವರ ಹೆಸರು ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ ಕಾರಣ ಅದನ್ನು ನಿಪಿ-1(ಡಿ) ಎಂದು ಗುರುತಿಸಲಾಯಿತು.

ದಾವಾ ಸ್ವತ್ತಿಗೆ ಸಂಬಂಧಿಸಿದ ಒಂದೇ  ಪಹಣಿ ಪತ್ರಿಕೆಯ ಒಂದೇ ಹಾಳೆಯನ್ನು ಹಾಜರುಪಡಿಸಿದ್ದು ಇನ್ನೊಂದು ಹಾಳೆ ಹಾಜರುಪಡಿಸುವ ಷರತ್ತಿಗೊಳಪಟ್ಟು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಪ್ರತಿವಾದಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

ಪ್ರತಿವಾದಿಗೆ ನೋಟಿಸು ಜಾರಿಯಾದ ಬಗ್ಗೆ  ಅಂಚೆ ಕಚೇರಿರವರು ನೀಡಿದ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಪ್ರತಿವಾದಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಅಂಚೆ ರಸೀದಿಯನ್ನು ನಿಪಿ-6 ಹಾಜರುಪಡಿಸಿದ್ದು ಎಂದು ಗುರುತಿಸಲಾಯಿತು.

ಪ್ರತಿವಾದಿ ಪರ ವಕೀಲರು ನೀಡಿದ ಜವಾಬು ನೋಟಿಸನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

**ಪಾಟಿ ಸವಾಲುಃ ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಪಾಟಿ  ಸವಾಲು ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ.

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು, ಜೇವರ್ಗಿ